**ಪಿ. ಡಬ್ಲ್ಯೂಃ 1**

**(ಸಾಕ್ಷಿಗೆ ಪ್ರಮಾಣವಚನ ಭೋದಿಸಲಾಯಿತು, ತಾಃ 05/02/2026)**

**ಮುಖ್ಯ ವಿಚಾರಣೆ : ವಾದಿ ಪರ ಶ್ರೀ ಎಮ್.ಜೆ.ಎನ್ ವಕೀಲರಿಂದ,**

ನಾನು ಈ ದಾವೆಯಲ್ಲಿ ವಾದಿ ಇದ್ದು, ನನ್ನ ಸಾಕ್ಷಿ ಪ್ರಮಾಣ ಪತ್ರವನ್ನು ದಾಖಲಿಸಿದ್ದು ಅದನ್ನು ನಾನು ಓದಿ ನೋಡಿ ಸಹಿ ಮಾಡಿರುತ್ತೇನೆ. ಅದರಲ್ಲಿ ಬರೆದ ಎಲ್ಲಾ ವಿಷಯಗಳು ನಿಜ ಇರುತ್ತವೆ.

ನನ್ನ ಮಗ ಕಾಣೆಯಾದ ಬಾಬ್ತು ನೀಡಿದ ದೂರಿಗೆ ಸಂಬಂಧಿಸಿದಂತೆ ಪ್ರಥಮ ವರ್ತಮಾನ ವರದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ಭಟ್ಕಳ ಗ್ರಾಮೀಣ ಪೊಲೀಸರಿಗೆ ದಿ.10.07.2024 ರಂದು ನೀಡಿದ ಅರ್ಜಿಯನ್ನು ನಿಪಿ-2 ಎಂದು, ದಿ.16.10.2024 ರಂದು ಮತ್ತು ದಿ.29.07.2024 ರಂದು ಪಟ್ಟಣ ಪಂಚಾಯತಿ ಜಾಲಿ ಇವರು ನೀಡಿದ ಹಿಂಬರಹಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-3 ಮತ್ತು ನಿಪಿ-4 ಎಂದು ಗುರುತಿಸಲಾಯಿತು.

**ವಾದಿ ಪರ ವಕೀಲರು ಮುಂದುವರಿದ ಮುಖ್ಯವಿಚಾರಣೆಗೆ ಕಾಲಾವಕಾಶ ಕೇಳಿದ್ದರಿಂದ ಮುಂದೂಡಲಾಯಿತು.**

**(ನನ್ನ ಹೇಳಿಕೆ ಪ್ರಕಾರ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ. ಹೇ.ಕೇ. ಸರಿ ಇದೆ**

**ಸಹಿ ಇದೆ**

**ಹೆಚ್ಚುವರಿ ಸಿವಿಲ್ ಜಡ್ಜ, ಭಟ್ಕಳ**